## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 103 ಸೇವನ 2024

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 18.01.2025

### ಅಧಿಸೂಚನೆ

ಕರ್ನಾಟಕ ರಾಜ್ಯ ನಾಗರಿಕ ಸೇವಾ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ (14) 8ನೇ ಪ್ರಕರಣದೊಂದಿಗೆ ಓದಲಾದಂತೆ, 3ನೇ ಪ್ರಕರಣದ (1)ನೇ ಉಪ-ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ರಚಿಸಿರುವ ಕರ್ನಾಟಕ ನಾಗರಿಕ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012ಕ್ಕೆ ತಿದ್ದುಪಡಿ ಮಾಡುವ ಸಲುವಾಗಿ ಈ ಕೆಳಗಿನ ನಿಯಮಗಳ ಕರಡನ್ನು, ಸದರಿ ಅಧಿನಿಯಮದ 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡದ ಮೂಲಕ ಅಗತ್ಯಪಡಿಸಲಾದಂತೆ ಇದರಿಂದ ಬಾಧಿತರಾಗುವ ಸಂಭವವಿರುವ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ, ಈ ಮೂಲಕ ಪ್ರಕಟಿಸಲಾಗಿದೆ ಮತ್ತು ಸದರಿ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಪ್ರಕಟಗೊಂಡ ದಿನಾಂಕದಿಂದ ಹದಿನೈದು ದಿನಗಳ ನಂತರ ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ಸೂಚಿಸಲಾಗಿದೆ.

ಸದರಿ ಕರಡು ನಿಯಮಗಳಿಗೆ ಸಂಬಂಧಪಟ್ಟಂತೆ ಮೇಲೆ ಗೊತ್ತುಪಡಿಸಿದ ಅವಧಿ ಕೊನೆಗೊಳ್ಳುವ ಮುಂಚೆ ಯಾರೇ ವ್ಯಕ್ತಿಯಿಂದ ರಾಜ್ಯ ಸರ್ಕಾರವು ಸ್ವೀಕರಿಸಬಹುದಾದ ಯಾವುದೇ ಆಕ್ಷೇಪಣೆ ಅಥವಾ ಸಲಹೆಯನ್ನು ರಾಜ್ಯ ಸರ್ಕಾರವು ಪರಿಗಣಿಸುತ್ತದೆ. ಆಕ್ಷೇಪಣೆಗಳು ಅಥವಾ ಸಲಹೆಗಳನ್ನು ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು-560001 ಇವರಿಗೆ ಸಲ್ಲಿಸತಕ್ಕದ್ದು.

### ಕರಡು ನಿಯಮಗಳು

**1. ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ನಾಗರಿಕ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) (ತಿದ್ದುಪಡಿ) ನಿಯಮಗಳು, 2025 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯ ಪತ್ರದಲ್ಲಿ ಅಂತಿಮವಾಗಿ ಪ್ರಕಟಗೊಂಡ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ನಿಯಮ 2ಕ್ಕೆ ತಿದ್ದುಪಡಿ:-** ಕರ್ನಾಟಕ ನಾಗರಿಕ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012ರ (ಇದರಲ್ಲಿ ಇನ್ನು ಮುಂದೆ ಸದರಿ ನಿಯಮಗಳೆಂದು ಉಲ್ಲೇಖಿಸಲಾಗಿದೆ) ನಿಯಮ 2ರಲ್ಲಿ "ದಿನಾಂಕ:31.12.2024 ರೊಳಗೆ" ಎಂಬ ಪದ ಮತ್ತು ಅಂಕಿಗಳ ಬದಲಿಗೆ "ದಿನಾಂಕ: 31.12.2025 ರೊಳಗೆ" ಎಂಬ ಪದ ಮತ್ತು ಅಂಕಿಗಳನ್ನು ದಿನಾಂಕ: 01.01.2025ರಿಂದ ಜಾರಿಗೆ ಬಂದಿವೆ ಎಂದು ಭಾವಿಸಿ ಪ್ರತಿಸ್ಥಾಪಿಸತಕ್ಕದ್ದು.

**3. ನಿಯಮ 3ಕ್ಕೆ ತಿದ್ದುಪಡಿ :-** ಸದರಿ ನಿಯಮಗಳ ನಿಯಮ 3ರಲ್ಲಿ,-

(ಎ) ಉಪ ನಿಯಮ (1)ರಲ್ಲಿ "ದಿನಾಂಕ: 31.12.2024 ರೊಳಗೆ", ಎಂಬ ಪದ ಮತ್ತು ಅಂಕಿಗಳ ಬದಲಿಗೆ "ದಿನಾಂಕ:31.12.2025 ರೊಳಗೆ", ಎಂಬ ಪದ ಮತ್ತು ಅಂಕಿಗಳನ್ನು ದಿನಾಂಕ: 01.01.2025ರಿಂದ ಜಾರಿಗೆ ಬಂದಿವೆ ಎಂದು ಭಾವಿಸಿ ಪ್ರತಿಸ್ಥಾಪಿಸತಕ್ಕದ್ದು ಮತ್ತು

(ಬಿ) ಉಪ ನಿಯಮ (2)ರಲ್ಲಿ "ದಿನಾಂಕ: 31.12.2024ರೊಳಗೆ", ಎಂಬ ಪದ ಮತ್ತು ಅಂಕಿಗಳ ಬದಲಿಗೆ "ದಿನಾಂಕ: 31.12.2025ರೊಳಗೆ", ಎಂಬ ಪದ ಮತ್ತು ಅಂಕಿಗಳನ್ನು ದಿನಾಂಕ: 01.01.2025ರಿಂದ ಜಾರಿಗೆ ಬಂದಿವೆ ಎಂದು ಭಾವಿಸಿ ಪ್ರತಿಸ್ಥಾಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

18-1-2025
(ವೀರಭದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1).
18/1/25

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು ಮತ್ತು ಕೃಷಿ ಉತ್ಪನ್ನ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು.
7. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
11. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು.
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
15. *ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ಬೆಂಗಳೂರು.
17. ನಿವಾಸಿ ಆಯುಕ್ತರು, ಕರ್ನಾಟಕ ಭವನ, ನಂ.10, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ- 110011.
18. ಎಲ್ಲಾ ಸಚಿವರ/ರಾಜ್ಯ ಸಚಿವರ ಆಪ್ತಕಾರ್ಯದರ್ಶಿಗಳು.
19. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
20. ಸಚಿವಾಲಯದ ಎಲ್ಲಾ ಶಾಖೆಗಳು
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
22. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

**(*ಮುಖಪತ್ರದೊಂದಿಗೆ)**